ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	–	1413 (1771)
ಉತ್ತರಿಸಬೇಕಾದ ದಿನಾಂಕ	–	19-03-2021
ಸದಸ್ಯರ ಹೆಸರು	–	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	–	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೀದರ್ ಜಿಲ್ಲೆಯಲ್ಲಿರುವ ವಸತಿ ಶಾಲೆ, ವಿದ್ಯಾರ್ಥಿನಿಯರ ನಿಲಯ ಹಾಗೂ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸ್ವಂತ ಕಟ್ಟಡದಲ್ಲಿ ಹಾಗೂ ಬಾಡಿಗೆಯಲ್ಲಿರುವ ನಿಲಯಗಳ ಸಂಖ್ಯೆ ಎಷ್ಟು;</td><td>ಬೀದರ್ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ 3 ವಸತಿ ಶಾಲೆಗಳು, 8 ಬಾಲಕರ ವಿದ್ಯಾರ್ಥಿ ನಿಲಯಗಳು ಹಾಗೂ 8 ಬಾಲಕಿಯರ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.
<table>
<tr><th colspan="2">3 ವಸತಿ ಶಾಲೆಗಳು</th><th colspan="2">8 ಬಾಲಕರ ವಿದ್ಯಾರ್ಥಿ ನಿಲಯಗಳು</th><th colspan="2">8 ಬಾಲಕಿಯರ ವಿದ್ಯಾರ್ಥಿ ನಿಲಯಗಳು</th></tr>
<tr><th>ಸ್ವಂತ ಕಟ್ಟಡ</th><th>ಬಾಡಿಗೆ ಕಟ್ಟಡ</th><th>ಸ್ವಂತ ಕಟ್ಟಡ</th><th>ಬಾಡಿಗೆ ಕಟ್ಟಡ</th><th>ಸ್ವಂತ ಕಟ್ಟಡ</th><th>ಬಾಡಿಗೆ ಕಟ್ಟಡ</th></tr>
<tr><td>2</td><td>1</td><td>7</td><td>1</td><td>7</td><td>1</td></tr>
</table></td></tr>
<tr><td>ಆ)</td><td>ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಜನ್ ವಿಕಾಸ ಕಾರ್ಯಕ್ರಮ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; (ವಿವರವಾದ ಮಾಹಿತಿಯನ್ನು ನೀಡುವುದು)</td><td>ಪ್ರಧಾನ ಮಂತ್ರಿ ಜನ್ ವಿಕಾಸ ಕಾರ್ಯಕ್ರಮ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ನೇರವಾಗಿ ಅನುದಾನವನ್ನು ಬಿಡುಗಡೆ ಮಾಡುವುದಿಲ್ಲ. ಸದರಿ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗಾಗಿ ವಸತಿ ಶಾಲೆ ಹಾಗೂ ವಿದ್ಯಾರ್ಥಿನಿಲಯಗಳ ಕಟ್ಟಡಗಳನ್ನು ನಿರ್ಮಾಣ ಮಾಡುವುದು.</td></tr>
<tr><td>ಇ)</td><td>ಅಲ್ಪಸಂಖ್ಯಾತರಿಗಾಗಿ ನೂತನ ಹಾಸ್ಟೆಲ್‌ಗಳನ್ನು ಪ್ರಾರಂಭಿಸಲು ಸರ್ಕಾರ ಇಚ್ಛಿಸಿದೆಯೇ? (ಮಾಹಿತಿ ನೀಡುವುದು)</td><td>-ಇಲ್ಲ-</td></tr>
</table>

ಸಂಖ್ಯೆ:MWD 124 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು